# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 596 |
| ಮಾನ್ಯ ಸದಸ್ಯರ ಹೆಸರು: | ಶ್ರೀ. ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ: | 19.09.2022 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸಕ್ತ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲ್ಲೂಕು ಕೇಂದ್ರದಲ್ಲಿ 100 ಹಾಸಿಗೆಗಳ ಆಸ್ಪತ್ರೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-112ರಲ್ಲಿ ತಾಲ್ಲೂಕು ಮಟ್ಟದಲ್ಲಿ ಸುಸಜ್ಜಿತ ವೈದ್ಯಕೀಯ ಸೇವೆಗಳನ್ನು ಒದಗಿಸಲು ರಾಜ್ಯದ 7 ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಘೋಷಿಸಲಾಗಿದೆ. ಇದರಲ್ಲಿ ಶೃಂಗೇರಿ ತಾಲ್ಲೂಕಿನಲ್ಲಿ 100 ಹಾಸಿಗೆಗಳ ನಿರ್ಮಾಣ ಕಾಮಗಾರಿಯು ಸೇರ್ಪಡೆಗೊಂಡಿದೆ. 7 ತಾಲ್ಲೂಕುಗಳ ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಸ್ವೀಕೃತಗೊಂಡಿರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ | ಸದರಿ ಆಸ್ಪತ್ರೆ ನಿರ್ಮಾಣ ಕಾಮಗಾರಿಗೆ ನಿಗದಿಪಡಿಸಿರುವ ಅಂದಾಜು ಮೊತ್ತವೆಷ್ಟು; | |
| ಇ | ಸದರಿ ಆಸ್ಪತ್ರೆ ಕಟ್ಟಡವನ್ನು ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗುವುದು; ಅದರ ವಿಸ್ತೀರ್ಣವೆಷ್ಟು? | |

ಆಕುಕ 174 ಎಸ್ ಎಂ ಎಂ 2022

(ಡಾ||ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು